ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 31
2. ಮಾನ್ಯ ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
3. ಉತ್ತರಿಸಬೇಕಾದ ದಿನಾಂಕ : 15.02.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	2020-21ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಪೂರ್ಣ ಪ್ರಮಾಣದ ಹಣವನ್ನು ಕಾರ್ಖಾನೆಯವರು ಪಾವತಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪ್ರತಿ ಟನ್‌ಗೆ ಎಷ್ಟು ಹಣ ಪಾವತಿ ಮಾಡಲಾಗಿದೆ; (ಮಾಹಿತಿ ನೀಡುವುದು)	ಬೀದರ್ ಜಿಲ್ಲೆಯಲ್ಲಿ 2020-21ನೇ ಸಾಲಿನಲ್ಲಿ ಸಹಕಾರಿ ವಲಯದ 2 ಹಾಗೂ ಖಾಸಗಿ ವಲಯದ 2 ಹೀಗೆ ಒಟ್ಟು 4 ಸಕ್ಕರೆ ಕಾರ್ಖಾನೆಗಳು ಕಾರ್ಯ ನಿರ್ವಹಿಸಿರುತ್ತವೆ. ಈ ನಾಲ್ಕೂ ಕಾರ್ಖಾನೆಗಳು ಕೇಂದ್ರ ಸರ್ಕಾರ ನಿಗದಿಪಡಿಸಿರುವ ನ್ಯಾಯ ಮತ್ತು ಲಾಭದಾಯಕ ದರ (ಎಫ್.ಆರ್.ಪಿ.) ಪ್ರತಿ ಟನ್ ಒಂದಕ್ಕೆ ರೂ.2708/- ರಂತೆ ರೈತರಿಗೆ ಕಬ್ಬು ಬಿಲ್ಲನ್ನು ಪೂರ್ಣವಾಗಿ ಪಾವತಿ ಮಾಡಿರುತ್ತವೆ. ಆದ್ದರಿಂದ ಕಾರ್ಖಾನೆಗಳು ರೈತರಿಗೆ ಪಾವತಿಸಬೇಕಾದ ಯಾವುದೇ ಬಾಕಿ ಇರುವುದಿಲ್ಲ.
(ಆ)	ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಡಳಿತ ಮತ್ತು ಕಾರ್ಖಾನೆಯವರು ಪ್ರತಿ ಟನ್‌ಗೆ ರೂ.2,400/- ನಿಗದಿಪಡಿಸಿ, ಹಣ ಪಾವತಿಸದಿರಲು ಕಾರಣವೇನು; (ವಿವರ ನೀಡುವುದು)	ಕೇಂದ್ರ ಸರ್ಕಾರವು ದಿನಾಂಕ: 26.08.2020 ರಂದು 2020-21ನೇ ಸಾಲಿನಲ್ಲಿ ಕಾರ್ಖಾನೆಗಳಿಗೆ ಸರಬರಾಜಾಗುವ ಕಬ್ಬಿಗೆ ಮೊದಲನೇ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಘೋಷಿಸಿರುತ್ತದೆ. ಆ ಪ್ರಕಾರವಾಗಿ ಶೇ.9.5 ಮತ್ತು ಅದಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಮೆ.ಟನ್‌ಗೆ ರೂ.2708/- ಹಾಗೂ ಶೇ.10 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆ.ಟನ್ ಒಂದಕ್ಕೆ ರೂ.2850/- ಗಳನ್ನು ನಿಗದಿಪಡಿಸಿದೆ. ಶೇ.10ರ ನಂತರದ ಪ್ರತಿ ಶೇ.1 ರಷ್ಟು ಇಳುವರಿಗೆ ಪ್ರತಿ ಮೆ.ಟನ್ ಒಂದಕ್ಕೆ ರೂ.285/- ರಂತೆ ಹೆಚ್ಚುವರಿ ಬೆಲೆ ನಿಗದಿಗೊಳಿಸಲಾಗಿದ್ದು, ಇದರ ಆಧಾರದ ಮೇಲೆ ರಾಜ್ಯದ ಕಾರ್ಖಾನೆಗಳು ನುರಿಸುವ ಪ್ರತಿ ಮೆ. ಟನ್ ಕಬ್ಬಿಗೆ ರೈತರಿಗೆ ಪಾವತಿಸಬೇಕಾದ ಎಫ್.ಆರ್.ಪಿ. ದರವನ್ನು 2020-21ನೇ ಹಂಗಾಮಿಗೆ ನಿಗದಿಗೊಳಿಸಿ ದಿನಾಂಕ: 02.11.2020 ರಂದು ಸಕ್ಕರೆ ನಿರ್ದೇಶನಾಲಯದಿಂದ ಆದೇಶ ಹೊರಡಿಸಲಾಗಿದೆ. ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಎಫ್.ಆರ್.ಪಿ. ದರವು ಎಕ್ಸ್ ಗೇಟ್ ದರವಾಗಿರುತ್ತದೆ. ಬೀದರ್ ಜಿಲ್ಲೆಯ 04 ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಪ್ರತಿ ಮೆ. ಟನ್ ಒಂದಕ್ಕೆ ಕಬ್ಬು ಬಿಲ್ಲು ಮೊತ್ತ ರೂ.1950/- ಪಾವತಿಸಿರುತ್ತವೆ. ಎಫ್.ಆರ್.ಪಿ.ದರ ರೂ.2708/- ಆಗಿದ್ದು, ರೂ.758/- ಕಬ್ಬು ಕಟಾವು ಮತ್ತು ಸಾಗಣಿಕೆ ದರ ಕಳೆದು ನಿವ್ವಳ ಮೊತ್ತ ರೂ.1950/-ಗಳನ್ನು ಪಾವತಿಸಿರುತ್ತವೆ. ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಎಫ್.ಆರ್.ಪಿ. ದರವನ್ನು ಹೊರತುಪಡಿಸಿ ಜಿಲ್ಲಾ ಉಸ್ತುವಾರಿ ಸಚಿವರಾಗಲೀ, ಜಿಲ್ಲಾಡಳಿತವಾಗಲೀ ಕಬ್ಬಿಗೆ ದರ ನಿಗದಿಪಡಿಸಲು ನಿಯಮಾನುಸಾರ ಅವಕಾಶವಿರುವುದಿಲ್ಲ.

....2

(ಇ)	ಹಣ ಪಾವತಿಸದ ಕಾರ್ಖಾನೆಗಳ ವಿರುದ್ಧ ಸರ್ಕಾರ ಮತ್ತು ಜಿಲ್ಲಾಡಳಿತ ತೆಗೆದುಕೊಂಡ ಕ್ರಮ ಏನು; ರೈತರಿಗೆ ಬರಬೇಕಾದ ಬಾಕಿ ಹಣ ಯಾವ ಕಾಲಮಿತಿಯಲ್ಲಿ ನೀಡಲಾಗುವುದು;	ಬೀದರ್ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು 2020-21ನೇ ಸಾಲಿನಲ್ಲಿ ನುರಿಸಿದ ಕಬ್ಬಿಗೆ ಕೇಂದ್ರ ಸರ್ಕಾರವು ನಿಗದಿಪಡಿಸಿದ ಎಫ್.ಆರ್.ಪಿ. ದರದಂತೆ ಕಬ್ಬು ಬಿಲ್ಲನ್ನು ಪೂರ್ಣವಾಗಿ ಪಾವತಿಸಿರುವುದರಿಂದ ಸರ್ಕಾರ ಅಥವಾ ಜಿಲ್ಲಾಡಳಿತ ಹಣ ಪಾವತಿಸದ ಕಾರ್ಖಾನೆಗಳ ವಿರುದ್ಧ ಕ್ರಮ ತೆಗೆದುಕೊಳ್ಳಬೇಕಾದ ಪ್ರಶ್ನೆ ಉದ್ಭವಿಸುವುದಿಲ್ಲ.
(ಈ)	ಜಿಲ್ಲೆಯಲ್ಲಿ ಇರುವ ಕಾರ್ಖಾನೆಗಳು ಕಳೆದ 4-5 ವರ್ಷಗಳಿಂದ ಕಡಿಮೆ ಇಳುವರಿ ತೋರಿಸುತ್ತಿರುವುದು ನಿಜವೇ; ಇದಕ್ಕೆ ಕಾರಣವೇನು; ಈ ಬಗ್ಗೆ ಉನ್ನತ ಮಟ್ಟದ ತನಿಖೆಯನ್ನು ಸರ್ಕಾರದಿಂದ ನಡೆಸಲಾಗುವುದೇ?	ಬೀದರ್ ಜಿಲ್ಲೆಯಲ್ಲಿ ಇರುವ ಕಾರ್ಖಾನೆಗಳು ಕಳೆದ 4-5 ವರ್ಷಗಳಿಂದ ಕಡಿಮೆ ಇಳುವರಿ ತೋರಿಸುತ್ತಿರುವ ಬಗ್ಗೆ ದೂರುಗಳು ಬಂದಿರುವುದಿಲ್ಲ. ಈ ಬಗ್ಗೆ ಸರ್ಕಾರಕ್ಕೆ ದೂರುಗಳು ಸ್ವೀಕೃತವಾದಲ್ಲಿ ನಿಯಮಾನುಸಾರ ಪರಿಶೀಲಿಸಿ ಅಗತ್ಯ ಕ್ರಮಕೈಗೊಳ್ಳಲಾಗುವುದು.

ಸಂಖ್ಯೆ: ಸಿಐ 18 ಎಸ್‌ಜಿಎಫ್ 2022

(ಶಂಕರ.ಬಿ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು